**<u>ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.</u>**

**<u>ಸಿ.ಸಿ.ನಂ.418/2018</u>**

| | | | |
|---|---|---|---|
| ಸಾಕ್ಷಿದಾರರ ಹೆಸರು | ಶಿವಪ್ಪ ಸಾಗರ | ಸಿಡಬ್ಲ್ಯೂ | 14 |
| ತಂದೆಯ ಹೆಸರು | ದುರ್ಗಪ್ಪ | ಪಿಡಬ್ಲ್ಯೂ | 9 |
| ವಯಸ್ಸು | 56 ವರ್ಷ | | |
| ಉದ್ಯೋಗ | ಪಿ.ಎಸ್.ಐ, ಕಾಗಿನೆಲೆ ಪೊಲೀಸ ಠಾಣೆ | | |
| ವಾಸಸ್ಥಳ | ಕಾಗಿನಲೆ | | |

**<u>ದಿಃ06.03.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಹಿ.ಸ.ಸ.ಅಭಿಯೋಜಕರಿಂದ.</u>**

1) ನಾನು ದಿನಾಂಕಃ 04.03.2016 ರಿಂದ ದಿನಾಂಕಃ 20.05.2020 ರವರೆಗೆ ಹಾವೇರಿ ಶಹರ ಪೊಲೀಸ ಠಾಣೆಯಲ್ಲಿ ಎ.ಎಸ್.ಐ ಆಗಿ ಸೇವೆ ಸಲ್ಲಿಸಿದ್ದೇನೆ. ದಿನಾಂಕಃ 11.12.2016 ರಂದು ನಾನು ಠಾಣಾ ಕರ್ತವ್ಯದಲ್ಲಿ ಇದ್ದಾಗ ಚಾ.ಸಾ-1 ಇವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ಪಿರ್ಯಾದಿಯ ಆಧಾರದ ಮೇಲೆ ಹಾವೇರಿ ಶಹರ ಪೊಲೀಸ ಠಾಣೆ ಗುನ್ನಾ ನಂಬರಃ 308/2016 ರಡಿಯಲ್ಲಿ ಪ್ರ.ವ.ವರದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಸಲ್ಲಿಸಿದ್ದೇನೆ.

2) ಚಾ.ಸಾ-1 ಇವರು ಕೊಟ್ಟಂತಹ ಪಿರ್ಯಾದಿಯನ್ನು ನೋಡಿದರೆ ಗುರುತಿಸಬಲ್ಲೆ. ಅದನ್ನು ನಿ.ಪಿ-13 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-13(ಎ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿ.ಪಿ-14 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-14(ಎ) ಎಂದು ಗುರುತಿಸಲಾಯಿತು.

ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾ.ಸಾ–15 ಇವರಿಗೆ ವಹಿಸಿಕೊಟ್ಟಿದ್ದೇನೆ.

**ಪಾಟೀ ಸವಾಲುಃ ಶ್ರೀ.ಎಂ.ಸಿ.ಹೆಚ್ ವಕೀಲರಿಂದಃ 1 ನೇ ಆರೋಪಿ ಪರವಾಗಿಃ**

2) ನಾನು ಈ ಪ್ರಕರಣದಲ್ಲಿ ಸರಿಯಾಗಿ 1 ನೇ ಆರೋಪಿಯ ವಿರುದ್ದ ಯಾವುದೇ ಅಪರಾಧ ಸಾಬೀತಾಗಿರುವದು ಕಂಡು ಬರದೇ ಇದ್ದರೂ ಸಹ ನಾನು 1 ನೇ ಆರೋಪಿಯ ವಿರುದ್ದ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ. ಆರೋಪಿಯ ಮಾನಸಿಕ ಸ್ಥಿತಿ ಸರಿ ಇದ್ದಾಗಲೂ ಸಹ ನಾನು ಆರೋಪಿಯ ವಿರುದ್ದ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಅಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.